ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,
ತಿ ನರಸೀಪುರ

**ಸಿ ಸಿ ಸಂಖ್ಯೆ: 174/2019**

## ದೋಷಾರೋಪಣೆ

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ ನರಸೀಪುರ ಆದ ನಾನು

ರಾಮು ಬಿನ್ ರವಳಯ್ಯ,
ವಯಸ್ಸುಃ 21 ವರ್ಷ, ವಾಸಃ ಕೊತ್ತೇಗಾಲ ಗ್ರಾಮ,
ತಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪ ಎನೆಂದರೇಃ-

ಮೊದಲನೆಯದಾಗಿ, ದಿಃ30.02.2017 ರಂದು ಮಧ್ಯಾಹ್ನ 3.40 ಗಂಟೆ ಸಮಯದಲ್ಲಿ ತಿ.ನರಸೀಪುರ ಪೋಲಿಸ್ ಠಾಣಾ ವ್ಯಾಪ್ತಿಯ ತಿ.ನರಸೀಪುರ ತಾಲ್ಲೂಕಿನ ಕೊತ್ತೆಗಾಲ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 7 ನೇ ತರಗತಿ ಕೊಠಡಿಯಲ್ಲಿ, ಆರೋಪಿತರಾದ ನೀವು ಸದರಿ ಶಾಲೆಯ ಕಾಂಪೌಂಡ್ ಮೇಲೆ ಹಿಂದೊಮ್ಮೆ ಕುಳಿತಿದ್ದರಿಂದ, ಆ ಶಾಲೆಯ ಮುಖ್ಯೋಪಾಧ್ಯಾಯರಾಗಿದ್ದ ಚಾಸಾ-1 ಮೋಹನ್ ಕುಮಾರ್ ರವರು ನಿಮಗೆ ತಿಳುವಳಿಕೆ ನೀಡಿದ್ದರಿಂದ, ನೀವು ಅವರ ಮೇಲೆ ದ್ವೇಷ ಹೊಂದಿ, ಅವರಿಗೆ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ನೆಮ್ಮದಿಗೆ ಭಂಗ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೆಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಚಾಸಾ-1ರವರನ್ನು ಹಿಡಿದುಕೊಂಡು ಡೆಸ್ಕಿಗೆ ಗುದ್ದಿಸಿ, ಬ್ಲೇಡಿನಿಂದ ಅವರ ಬೆನ್ನಿನ ಮೇಲೆ ಹೊಡೆದು ಅವರಿಗೆ ಸಾದಾ ಸ್ವರೂಪದ ಗಾಯ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ.324 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಮೂರನೆಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು, ಚಾಸಾ-1ರವರ ಸರ್ಕಾರಿ ಕೆಲಸಕ್ಕೆ ಅಡ್ಡಿ ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ. 353 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಚಾಸಾ-1ರವರು ಸರ್ಕಾರಿ ನೌಕರನಾಗಿದ್ದು, ಅವರಿಗೆ ಈ ಮೇಲೆ ಹೇಳಿದ ರೀತಿ ಹಲ್ಲೆ ಮಾಡಿ ಅವರಿಗೆ ಸಾದಾ ಗಾಯ ಪಡಿಸುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ. 332 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಐದನೆಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಚಾಸಾ-1ರವರಿಗೆ ಕೊಲೆ ಬೆದರಿಕೆ ಹಾಕುವ ಮೂಲಕ

ಭಾರತೀಯ ದಂಡ ಸಂಹಿತೆ ಕಲಂ. 506 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾನು ಈ ಮೇಲಿನ ದೋಷಾರೋಪಣೆಗಳ ಮೇಲೆ ಈ ನ್ಯಾಯಾಲಯದ ವಿಚಾರಣೆಗೆ ನೀವು ಗುರಿಯಾಗಬೇಕೆಂದು ನಿರ್ದೇಶಿಸುತ್ತೇನೆ.

**ದಿನಾಂಕಃ 21.09.2023**

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ಟಿ ನರಸೀಪುರ.**

ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,
ತಿ ನರಸೀಪುರ

**ಸಿ ಸಿ ಸಂಖ್ಯೆ: 174/2019**

**ದೋಷಾರೋಪಣೆ**

ರಾಮ ಬಿನ್ ರವಳಯ್ಯ,
ವಯಸ್ಸುಃ 21 ವರ್ಷ, ವಾಸಃ ಕೊತ್ತೇಗಾಲ ಗ್ರಾಮ,
ತಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು

ಪ್ರಶ್ನೆಃ ನೀವು ಸದರಿ ದೋಷಾರೋಪವನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು.

(ಮೇಲಿನ ದೋಷಾರೋಪಣೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕಃ 21.09.2023

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಟಿ ನರಸೀಪುರ.